**ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,**

**ತಿ. ನರಸೀಪುರ**

**ಸಿ ಸಿ ಸಂಖ್ಯೆ: 184/2023**

**ದೋಷಾರೋಪಣೆ**

ಶ್ರೀ ಹನುಮಂತ ಜಿ.ಹೆಚ್. ಬಿ.ಎ.ಎಲ್., ಎಲ್‌ಎಲ್.ಎಮ್., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ, ತಿ. ನರಸೀಪುರ ಆದ ನಾನು

ಶಿವಣ್ಣ ಬಿನ್ ಮೋಪಶೆಟ್ಟಿ
50 ವರ್ಷ, ವಾಸಃ ಹೊಸಕೆಂಪಯ್ಯನಹುಂಡಿ ಗ್ರಾಮ,
ತಿ. ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

ಎಂಬ ಆರೋಪಿತರಾದ ನಿಮ್ಮ ಮೇಲೆ ಈ ಕೆಳಗಿನಂತೆ ಹೊರಿಸುವ ದೋಷಾರೋಪ ಎನೆಂದರೆ :-

ಮೊದಲನೆಯದಾಗಿ, ದಿನಾಂಕ 16.11.2022 ರಂದು ಸಂಜೆ 5.30 ಗಂಟೆ ಸಮಯದಲ್ಲಿ, ತಿ.ನರಸೀಪುರ ಪೋಲಿಸ್ ಠಾಣಾ ಸರಹದ್ದಿನ, ತಿ.ನರಸೀಪುರ ತಾಲ್ಲೂಕಿನ ಹೊಸಕೆಂಪಯ್ಯನಹುಂಡಿ ಗ್ರಾಮದ ಬಸ್ ನಿಲ್ದಾಣದ ಬಳಿ ನಾಗಶೆಟ್ಟಿ ರವರ ಮನೆಯ ಮುಂಭಾಗ ತಿ.ನರಸೀಪುರ - ಮೈಸೂರು ಮುಖ್ಯ ರಸ್ತೆಯ ಫುಟ್ ಪಾತ್‌ನಲ್ಲಿ, ಆರೋಪಿಯಾದ ನೀವು ಜಮೀನಿನ ವಿಚಾರದಲ್ಲಿ ಇದ್ದ ಹಳೆಯ ವೈಮನಸ್ಸಿನಿಂದ, ಚಾಸಾ-2/ಶ್ರೀಮತಿ ಸರಸ್ವತಿ ಹಾಗೂ ಚಾಸಾ-3/ಸಿದ್ದಶೆಟ್ಟಿ ರವರನ್ನು ಮುಂದೆ ಹೋಗದಂತೆ ಹಿಡಿದುಕೊಂಡು ಅಡ್ಡಗಟ್ಟಿ ಅಕ್ರಮ ತಡೆ ಉಂಟು ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 341 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಎರಡನೇಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಯಾದ ನೀವು ಚಾಸಾ-2 ಮತ್ತು 3 ರವರನ್ನು ಉದ್ದೇಶಿಸಿ, "ಬಡ್ಡಿ ಸೂಳೆ, ನಿಮ್ಮವನ್" ಎಂದು ಅವಾಚ್ಯ ಶಬ್ದಗಳಿಂದ ಬೈದು ಸಾರ್ವಜನಿಕ ಶಾಂತಿಗೆ ಭಂಗಪಡಿಸುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಮೂರನೇಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಯಾದ ನೀವು ಚಾಸಾ-2 ರವರನ್ನು ಕೆಳಕ್ಕೆ ಕೆಡವಿಕೊಂಡು ಅವರ ರವಿಕೆಯನ್ನು ಹರಿದು ಹಾಕಿ, ಅವರಿಗೆ ಅವಮಾನ ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 354-ಬಿ ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ನಾಲ್ಕನೇಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಯಾದ ನೀವು ನಿಮ್ಮ ಕಾಲಿನಿಂದ ಚಾಸಾ-2 ರವರ ಎದಗೆ ತುಳಿದು, ಅವರಿಗೆ ಸಾದಾ ಸ್ವರೂಪದ ನೋವುಂಟು ಮಾಡುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ಐದನೇಯದಾಗಿ, ಮೇಲೆ ಹೇಳಿದ ದಿನ, ಸಮಯ ಮತ್ತು ಸ್ಥಳದಲ್ಲಿ, ಆರೋಪಿಯಾದ ನೀವು ದೊಣ್ಣೆಯಿಂದ ಚಾಸಾ-2 ರವರ ತಲೆಗೆ, ಕಪಾಲಕ್ಕೆ ಮತ್ತು ಎಡತೋಳಿಗೆ ಹಾಗೂ ಚಾಸಾ-3 ರವರ ಎಡಭುಜಕ್ಕೆ ಹೊಡೆದು ಅವರಿಗೆ ಸಾದಾ

ಸ್ವರೂಪದ ಗಾಯಪಡಿಸುವ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 324 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿದ್ದು, ಅದು ನನ್ನ ಸಂಜ್ಞೆಯಲ್ಲಿ ಬರುತ್ತದೆ.

ನಾನು ಈ ಮೇಲಿನ ದೋಷಾರೋಪಣೆಗಳ ಮೇಲೆ ಈ ನ್ಯಾಯಾಲಯದ ವಿಚಾರಣೆಗೆ ನೀವು ಗುರಿಯಾಗಬೇಕೆಂದು ನಿರ್ದೇಶಿಸುತ್ತೇನೆ.

ದಿನಾಂಕ 16.05.2025.

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ., ತಿ. ನರಸೀಪುರ**

**ಹಿರಿಯ ಸಿವಿಲ್ ನ್ಯಾಯಾಧೀಶರ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ,**

**ತಿ. ನರಸೀಪುರ**

**ಸಿ ಸಿ ಸಂಖ್ಯೆ: 184/2023**

**ದೋಷಾರೋಪಣೆ**

ಶ್ರೀ ಹನುಮಂತ ಜಿ.ಹೆಚ್. ಬಿ.ಎ.ಎಲ್., ಎಲ್‌ಎಲ್.ಎಮ್., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ, ತಿ. ನರಸೀಪುರ ಆದ ನಾನು

ಶಿವಣ್ಣ ಬಿನ್ ಮೋಪಶೆಟ್ಟಿ
50 ವರ್ಷ, ವಾಸಃ ಹೊಸಕೆಂಪಯ್ಯುನಹುಂಡಿ ಗ್ರಾಮ,
ತಿ. ನರಸೀಪುರ ತಾಲ್ಲೂಕು, ಮೈಸೂರು ಜಿಲ್ಲೆ.

ಪ್ರಶ್ನೆಃ ನಿಮ್ಮ ಮೇಲೆ ಹೊರಿಸಲಾದ ದೋಷಾರೋಪಣೆ ಕೇಳಿದ್ದೀರಾ? ಅದು ನಿಮಗೆ ತಿಳಿಯಿತೇ?

ಉತ್ತರಃ ಹೌದು

ಪ್ರಶ್ನೆಃ ನೀವು ಸದರಿ ದೋಷಾರೋಪವನ್ನು ಒಪ್ಪಿಕೊಳ್ಳುತೀರಾ? ಅಥವಾ ನಿಮ್ಮ ವಿರುದ್ಧ ವಿಚಾರಣೆ ನಡೆಯಬೇಕೇ?

ಉತ್ತರಃ ವಿಚಾರಣೆಯಾಗಬೇಕು.

(ಮೇಲಿನ ದೋಷಾರೋಪಣೆಯನ್ನು ಆಪಾದಿತರಿಗೆ ತಿಳಿದಿರುವ ಭಾಷೆಯಲ್ಲಿ ಓದಿ, ತಿಳಿಸಿ ಹೇಳಿ ಅವರು ನೀಡಿದ ಉತ್ತರವನ್ನು ಬರೆದುಕೊಂಡಿರುವುದಾಗಿ ಈ ಮೂಲಕ ದೃಢೀಕರಿಸಲಾಗಿದೆ.)

ದಿನಾಂಕ 16.05.2025.

**ಹಿರಿಯ ಸಿವಿಲ್ ನ್ಯಾಯಾಧೀಶರು**
**ಮತ್ತು ಪ್ರ.ದ.ನ್ಯಾದಂ., ತಿ. ನರಸೀಪುರ**